# ಕರ್ನಾಟಕ ಸರ್ಕಾರ ನಡವಳಗಳು

ವಿಷಯ: ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದಲ್ಲಿ ವಿಫಲವಾಗಿರುವ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ.
1) ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಅಧಿನಿಯಮ 2005 ಕಲಂ 15 ಮತ್ತು ಕಾರ್ಯಾಚರಣೆ ಮಾರ್ಗಸೂಚಿ 2013.
2) ದಿನಾಂಕ: 03.06.2015ರಂದು ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಕೂಲಿ ಪಾವತಿ ತೀರುವಳಿ ಕುರಿತು ಆಯುಕ್ತರು ನೀಡಿರುವ ಸೂಚನೆ.

ಪ್ರಸ್ತಾವನೆ:

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯು ಗ್ರಾಮೀಣ ಪ್ರದೇಶದ ಜನರಿಗೆ ಒಂದು ಶಾಸನ ಬದ್ಧ ಅಧಿಕಾರ ನೀಡುತ್ತದೆ. ಈ ಶಾಸನ ಬದ್ಧ ಅಧಿಕಾರವನ್ನು ಸಾರ್ವಜನಿಕರಿಗೆ ತಲುಪಿಸಲು ಉದ್ಯೋಗ ಖಾತರಿ ಅಧಿನಿಯಮ 2005 ಕಲಂ 15ರ ಅನ್ವಯ ಸಂಪೂರ್ಣ ಜವಾಬ್ದಾರಿಯು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ, ಸಮಿತಿಯವರ ಮೇಲೆ ಇರುತ್ತದೆ. ಇದರಲ್ಲಿ ಮುಖ್ಯವಾಗಿ

1) ಅಕುಶಲ ಕಾರ್ಮಿಕರಿಗೆ ಸಕಾಲದಲ್ಲಿ ಕೂಲಿ ಸಂದಾಯ

2) ಕಾರ್ಮಿಕರಿಗೆ ಉದ್ಯೋಗ ಒದಗಿಸುವುದು

3) ಅಕುಶಲ ಕೂಲಿ ಪಾವತಿ ವಿಳಂಬ ಸಂದರ್ಭದಲ್ಲಿ ವಿಳಂಬ ಪರಿಹಾರ ಆದೇಶಿಸುವುದು.

4) ಉದ್ಯೋಗ ಖಾತರಿ ಯೋಜನೆಯ ನಿಯಮ ಹಾಗೂ ಮಾರ್ಗಸೂಚಿಯಂತೆ ಪರಿಣಾಮಕಾರಿಯಾಗಿ ನಡೆಸುವುದು.

ಮೇಲಿನ ವಿಷಯಗಳ ಬಗ್ಗೆ ಪತ್ರಗಳು, ವಿಡಿಯೋ ಸಂವಾದಗಳು, ಪ್ರತಿ ತಿಂಗಳು ನಡೆಯುತ್ತಿರುವ ಸ್ಯಾಟ್ ಕಾಂ ಸಂವಾದಗಳ ಮೂಲಕ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿತ್ತು. ಆದಾಗ್ಯೂ ಶ್ರೀ ಬಿ.ತಿಮ್ಮರಾಯಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶಿರಾ, ಇವರು ಕೆಳಕಂಡ ಶಾಸನ ಬದ್ಧ ಜವಾಬ್ದಾರಿಯನ್ನು ನಿರ್ವಹಿಸಲು ವಿಫಲರಾಗಿರುವುದು ಅಂತರ್ಜಾಲದಲ್ಲಿನ ಮಾಹಿತಿಯಿಂದ ಕಂಡುಬಂದಿರುತ್ತದೆ.

| Un skilled wages | | PD Generation in last 15 days | Delay wages compensation payable |
|---|---|---|---|
| Pending wage (as on 29.08.2015 | Payment in last 15-days (in lakhs) | | |
| 63.53 | 1.84 | 851 | Rs.2169.91 |

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯು ಗ್ರಾಮೀಣ ಜನರಿಗೆ ಉದ್ಯೋಗ ಒದಗಿಸುವ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಶ್ರೀ ಬಿ.ತಿಮ್ಮರಾಯಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶಿರಾ, ಇವರು ಶಾಸನ ಬದ್ಧ ಕರ್ತವ್ಯಗಳನ್ನು ನಿರ್ವಹಿಸದೆ ವಿಫಲರಾಗುವ ಮೂಲಕ ಸರ್ಕಾರಿ ಸೇವೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ಇರುವುದರಿಂದ ಯೋಜನೆಯ ಉದ್ದೇಶವು ವಿಫಲವಾಗಿರುತ್ತದೆ. ಹಾಗಾಗಿ ಸದರಿಯವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘಿಸಿರುತ್ತಾರೆ. ಆದ್ದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗೆಗಿನ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸೇವೆಯಿಂದ ಅಮಾನತ್ತುಪಡಿಸಲು ಸರ್ಕಾರವು ತೀರ್ಮಾನಿಸಿದೆ.

ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 233 ವಿಸೇಜಿ 2015**
**ಬೆಂಗಳೂರು ದಿನಾಂಕ: 08.09.2015**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು, ಶ್ರೀ ಬಿ.ತಿಮ್ಮರಾಯಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶಿರಾ, ಇವರು ಶಾಸನ ಬದ್ಧ ಜವಾಬ್ದಾರಿ ನಿರ್ವಹಿಸುವಲ್ಲಿ ವಿಫಲರಾಗಿರುವುದರಿಂದ ಇವರ ವಿರುದ್ಧದ ಆರೋಪದ ಬಗೆಗಿನ ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 10(1)(ಡಿ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಮಾನತ್ತಿನಲ್ಲಿರಿಸಿ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಸದರಿ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು

ಪ್ರತಿ:
1) ಪ್ರಧಾನ ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ)ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2) ಪ್ರಧಾನ ಮಹಾಲೇಖಪಾಲರು, (ಇ&ಆರ್‌ಎಸ್‌ಎ)ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3) ಪ್ರಧಾನ ಮಹಾಲೇಖಪಾಲರು, (ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.

4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ ತುಮಕೂರು

5) ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.

6) ಸಂಬಂಧಪಟ್ಟ ಅಧಿಕಾರಿ. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ತುಮಕೂರು)

7) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.

8) ಸರ್ಕಾರದ ಜಂಟಿ ಕಾರ್ಯದರ್ಶಿ (ಆ) / ಉಪಕಾರ್ಯದರ್ಶಿ (ಆ), ಗ್ರಾ.ಅ.ಪಂ.ರಾಜ್ ಇಲಾಖೆ. ಇವರ ಆಪ್ತ ಸಹಾಯಕರುಗಳು.

9) ಸಿಸ್ಟಂ ಮ್ಯಾನೇಜರ್, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.

10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.